ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 24–08–2020

# ಪತ್ರಿಕಾ ಪ್ರಕಟಣೆ

## ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ರಾಜ್ಯ ಕೃಷಿ ಕ್ಷೇತ್ರದಲ್ಲಿ ವಿನೂತನ/ಹೊಸ ಆನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಕ್ರಮಗಳಿಂದ ಸಾಧನೆ ಮಾಡಿದ ಸೃಜನಶೀಲ ರೈತರಿಂದ 2020–21 ನೇ ಸಾಲಿನ "ಕೃಷಿ ಪಂಡಿತ" ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ರೈತರು ಅರ್ಜಿ ಸಲ್ಲಿಸಲು 07 ನೇ ಸೆಪ್ಟೆಂಬರ್ 2020 ಕೊನೆಯ ದಿನವಾಗಿರುತ್ತದೆ. ಅರ್ಜಿ ನಮೂನೆ, ಸ್ಪರ್ಧಿಸಲು ಅರ್ಹತೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಲಿ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನಾಗಲಿ ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ ಡೆಹರಾಡೂನ್ ಶಾಲೆ 8 ನೇ ತರಗರಿಗೆ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ಉತ್ತರಾಖಂಡ ರಾಜ್ಯದ ಡೆಹರಾಡೂನಿನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್ ಇಲ್ಲಿ 8 ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2020ರ ಡಿಸೆಂಬರ್ 1 ಮತ್ತು 2 ರಂದು ನಡೆಸಲಾಗುವುದು.

ಪ್ರಸ್ತುತ 7 ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ 13 ವರ್ಷದೊಳಗಿರುವ ಬಾಲಕರು ಮಾತ್ರ ಸದರಿ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ.

ಅರ್ಜಿ ನಮೂನೆಯನ್ನು ನಿರ್ದೇಶಕರು, ಸೈನಿಕ ಮತ್ತು ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕಾರ್ಯಪ್ಪ, ಭವನ, ನಂ. 58 ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ರಸ್ತೆ, ಬೆಂಗಳೂರು ಇಲ್ಲಿಂದ ಪಡೆಯಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ 0780– 25589459 ಅಥವಾ ಸಮೀಪದಲ್ಲಿರುವ ತಮ್ಮ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಾರ್ಯಾಲಯವನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಂಗವಿಕಲ ಮಕ್ಕಳ ಮೇಲೆ ಅಮಾನವೀಯ ಘಟನೆಗಳು ನಡೆಯದಂತೆ ಮುಂಜಾಗ್ರತೆ ವಹಿಸಲು ಅಧಿಕಾರಿಗಳಿಗೆ ಸೂಚನೆ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ):

ಅಂಗವಿಕಲ ವ್ಯಕ್ತಿಗಳಿಗೆ ಸಮಾಜದಲ್ಲಿ ಸಮಾನ ಅವಕಾಶ ನೀಡಿ ಅವರ ಗೌರವವನ್ನು ಕಾಪಾಡುವ ನಿಟ್ಟಿನಲ್ಲಿ ಮುಂಬರುವ ವರ್ಷಗಳಲ್ಲಿ ಸಂಭವಿಸುವ ಗ್ರಹಣಗಳು ಅಥವಾ ಇನ್ನಾವುದೇ ಪ್ರಸಂಗಗಳಲ್ಲಿ ಅಂಗವಿಕಲರುಗಳನ್ನು ಅವಮಾನಿಸುವಂತಹ ಘಟನೆಗಳನ್ನು ನಡೆಯದಂತೆ ಮುಂಜಾಗ್ರತೆ ವಹಿಸುವಂತೆ ಜಿಲ್ಲೆಯಲ್ಲಿರುವ ಎಲ್ಲಾ ಅಧಿಕಾರಿಗಳಿಗೆ, ,ಸ್ಥಳೀಯ ಸಂಘ–ಸಂಸ್ಥೆಗಳಿಗೆ, ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ, ಎ.ಸಿ.ಡಿ.ಪಿ.ಓ., ಎಂ.ಆರ್.ಡಬ್ಲ್ಯೂ, ಯು.ಆರ್.ಡಬ್ಲೂ ಮತ್ತು ಆಶಾಕರ್ತೆಯರಿಗೆ ರಾಜ್ಯ ಅಂಗವಿಕಲ ಆಯುಕ್ತರಾದ ವಿ.ಎಸ್. ಬಸವರಾಜು ಸೂಚಿಸಿದ್ದಾರೆ.

## 7ನೇ ಅಧಿವೇಶನ ನಡೆಸಲು ವಿಧಾನಸಭೆಯ ಸಭಾಂಗಣ ಪರಿಶೀಲನೆ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ):

ಪ್ರಸಕ್ತ ೧೫ನೇ ವಿಧಾನಸಭೆಯ ೭ನೇ ಅಧಿವೇಶನ ನಡೆಸುವ ಸಾಧ್ಯಾಸಾಧ್ಯತೆ ಕುರಿತಂತೆ ಇಂದು ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿಯವರು, ಕಾನೂನು ಸಚಿವರಾದ ಮಾಧುಸ್ವಾಮಿ, ಸರ್ಕಾರದ ಮುಖ್ಯ

ಕಾರ್ಯದರ್ಶಿಗಳಾದ ವಿಜಯಭಾಸ್ಕರ್ ಹಾಗೂ ವಿಧಾನಸಭೆಯ ಹಿರಿಯ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿ ಚರ್ಚಿಸಿದರು. ಸಭೆಯ ನಂತರ ವಿಧಾನಸಭೆಯ ಸಭಾಂಗಣವನ್ನು ವೀಕ್ಷಿಸಿದರು.

## ಮೂರು ವರ್ಷಗಳ ಡಿಪ್ಲೋಮಾ ಕೋರ್ಸ್‌ಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ):

2020-21ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಮೂರು ವರ್ಷಗಳ ಡಿಪ್ಲೋಮಾ ಕೋರ್ಸ್ ಕಲಿಕೆಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಒಟ್ಟು 42 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಅವಕಾಶವಿರುತ್ತದೆ. ವ್ಯಾಸಂಗ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಮಾಹೆಯಾನ 1,000 ರೂ.ಗಳಿಂದ 1,200 ರೂ.ಗಳ ವರೆಗೆ ಶಿಷ್ಯ ವೇತನ ಹಾಗೂ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಅರ್ಜಿ ಸಲ್ಲಿಸಲು ಇಚ್ಚಿಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಜುಲೈ 1, 2020ಕ್ಕೆ ಅನ್ವಯಿಸಿದಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 15 ರಿಂದ 23 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 15 ರಿಂದ 25ರ ವಯೋಮಿತಿಯಲ್ಲಿರಬೇಕು.

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್ ಏರ್ಪಡಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ವಿವರ ಹಾಗೂ ಅರ್ಜಿಗಾಗಿ ಕಛೇರಿ ದೂರವಾಣಿ ಸಂ: 080-23561628/23566082/23568223 ಅಥವಾ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಾಸಪುರ, ಗದಗ ದೂರವಾಣಿ ಸಂಖ್ಯೆ 08372-297221 ಅಥವಾ ಆಯಾ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಇವರುಗಳನ್ನು ಸಂಪರ್ಕಿಸಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಾಸಪುರ, ಗದಗ-582102 ಇವರಿಗೆ ಸೆಪ್ಟೆಂಬರ್ 10 ರೊಳಗೆ ಸಲ್ಲಿಸಲು ಪ್ರಕಟಣೆ ತಿಳಿಸಿದೆ.

## ಕೋವಿಡ್-19 ಕಾರ್ಯತಂತ್ರ ಹಾಗೂ ಪರಿಹಾರ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಇವರ ಸಹಯೋಗದಲ್ಲಿ ತಜ್ಞರ ತಂಡದೊಂದಿಗೆ ಚರ್ಚಿಸಿ ಸಿದ್ಧಪಡಿಸಿರುವ ಕೋವಿಡ್–19 ಕಾರ್ಯತಂತ್ರ ಹಾಗೂ ಮುಂದಿನ ದಾರಿ ಕುರಿತಂತೆ, ಕೋವಿಡ್ –19 ರಿಂದ ಸಂಭವಿಸಿದ ವಿವಿಧ ಕ್ಷೇತ್ರಗಳಲ್ಲಿನ ಸವಾಲುಗಳಿಗೆ ಪರಿಹಾರ ಕಾಣಲು ಕ್ರಿಯಾತಂತ್ರಗಳು ರೂಪಿಸಲಾಗಿದೆ ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಶ್ರೀಮತಿ ಶಾಲಿನಿ ರಜನೀಶ್ ಅವರು ತಿಳಿಸಿದ್ದಾರೆ.

ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆದೇಶದಂತೆ, ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಶಿಫಾರಸ್ಸುಗಳನ್ನು ಸಂಬಂಧಪಟ್ಟ ಆಯಾ ಇಲಾಖೆಗಳಿಗೆ ಈಗಾಗಲೇ ಕಳುಹಿಸಲಾಗಿದೆ. ಈ ವರದಿಯ ಶಿಫಾರಸ್ಸುಗಳಿಗೆ ನಾಗರೀಕರ ಸಹಭಾಗಿತ್ವ ಅಥವಾ ಸಲಹೆಗಳನ್ನು ಪಡೆಯಲು ತಿಳಿಸಲಾಗಿದೆ ಎಂದು ಅಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ)

ಕಂದಾಯ ಸಚಿವ ಆರ್. ಅಶೋಕ್ ಅವರು ಆಗಸ್ಟ್ 25 ರಿಂದ 27 ರ ವರೆಗೆ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಯಾದಗಿರಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಆಗಸ್ಟ್ 27 ರಂದು ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮಕ್ಕಳ ಕಲ್ಯಾಣ ಕ್ಷೇತ್ರ

## ರಾಜ್ಯ ಪ್ರಶಸ್ತಿಗಾಗಿ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 24 (ಕರ್ನಾಟಕ ವಾರ್ತೆ):

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ.25,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ

ಸಂಸ್ಥೆಗಳಿಗೆ ತಲಾ ರೂ.1,00,000/– ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2020ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ:15.09.2020ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## APPLICATIONS INVITED FOR STATE AWARD FOR INDIVIDUALS AND INSTITUTIONS IN THE FIELD OF CHILD WELFARE

**Bengaluru, August 24 (Karnataka Information)**

Government of Karnataka confers award to Individuals and Institutions who have worked for the welfare of children for more than 5 years. Individual award carries cash prize of Rs.25,000/- and a citation and Institutional award carries cash prize of Rs.1,00,000/- and a citation.

The prescribed forms for the year 2020 may be obtained from the Deputy Director of Women & Child Development Department in the respective Districts. The filled applications should be submitted to the concerned District Deputy Director of Women & Child Development Department on or before 15.09.2020. The applications received after due date will not be considered. The applications should be submitted in Kannada only says official press release.

District Judges Selection list announced

Bengaluru August 24, (Karnataka Information):

High Court of Karnataka dated 21-10-2019 invited online applications for filling up of 21 posts of District Judges by direct recruitment.

The list of candidates selected for the post of District Judges by direct recruitment, is published on the High Court of Karnataka Website: http://karnatakajudiciary.kar.nic.in/recruitment.asp. says press not release.

**ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಮಾತ್ರ ಪಿಂಚಣಿ ಸೌಲಭ್ಯ**

**ಬೆಂಗಳೂರು, ಆಗಸ್ಟ್ 24, (ಕರ್ನಾಟಕ ಸರ್ಕಾರ)**

ಇತ್ತೀಚಿಗೆ ನಡೆದ ರಾಷ್ಟ್ರಮಟ್ಟದ ಬ್ಯಾಂಕುಗಳ ವಿಲೀನದ ನಂತರ ಹಲವು ಬ್ಯಾಂಕುಗಳು ಸೇರಿ ಒಂದು ಬ್ಯಾಂಕ್ ಆಗಿರುವ ಹಿನ್ನಲೆಯಲ್ಲಿ ಸಾರ್ವಜನಿಕರು ಇನ್ನೂ ಮುಂದೆ ತಮ್ಮ ಪಿಂಚಣಿಗಳನ್ನು ಕೆನರಾ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ ಮತ್ತು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಮುಖಾಂತರ ಪಡೆಯಬಹುದು ಎಂದು ಪಿಂಚಣಿ ಬಟವಾಡೆ ಖಜಾನೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರದ ಪಿಂಚಣಿದಾರರು/ಕುಟುಂಬ ಪಿಂಚಣಿದಾರು ಆಗಸ್ಟ್ 2020 ರಿಂದ ಮಾಹೆಯಿಂದ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಪಿಂಚಣಿಯನ್ನು ಪಡೆಯಬಹುದಾಗಿದೆ. ಎಸ್.ಬಿ.ಐ, ಕೆನರಾಬ್ಯಾಂಕ್, ಸಿಂಡಿಕೇಟ್ ಬ್ಯಾಂಕ್‌ನಲ್ಲಿ ಖಾತೆ ಹೊಂದಿದವರು ಕೆನರಾ ಬ್ಯಾಂಕ್‌ನಿಂದ ಪಡೆಯಬಹುದಾಗಿದೆ.

ವಿಜಯಾ ಬ್ಯಾಂಕ್, ದೇನಾ ಬ್ಯಾಂಕ್ ನಲ್ಲಿ ಖಾತೆ ಹೊಂದಿದವರು ಬ್ಯಾಂಕ್ ಆಫ್ ಬರೋಡದಲ್ಲಿ ಪಡೆಯಬಹುದು. ಕಾರ್ಪೊರೇಷನ್ ಬ್ಯಾಂಕ್ ಹಾಗೂ ಆಂಧ್ರ ಬ್ಯಾಂಕ್‌ನಲ್ಲಿ ಪಿಂಚಣಿ

**ಪಡೆಯುತ್ತಿರುವವರು ಯುನಿಯನ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಮಾತ್ರ ಪಿಂಚಣಿ ಸೌಲಭ್ಯ ಪಡೆಯಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

# ಮಾದರಿ ಡಿಜಿಟಲ್ ಗ್ರಂಥಾಲಯ ವ್ಯವಸ್ಥೆ: ಕರ್ನಾಟಕ ಮಾದರಿ– ಸುರೇಶ್ ಕುಮಾರ್

**ಬೆಂಗಳೂರು, ಆಗಸ್ಟ್ 24, (ಕರ್ನಾಟಕ ಸರ್ಕಾರ)**

**ಇಡೀ ದೇಶದಲ್ಲಿ ಮಾದರಿ ಡಿಜಿಟಲ್ ಗ್ರಂಥಾಲಯ ವ್ಯವಸ್ಥೆಯನ್ನು ಹೊಂದಿದ ಮೊದಲ ರಾಜ್ಯ ಕರ್ನಾಟಕ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದ್ದಾರೆ.**

ಸೋಮವಾರ ನಗರದ ಜಕ್ಕೂರಿನ ಎಂಸಿಇಎಸಿಎಚ್ ಬಡಾವಣೆಯ ಡಾ. ಶಿವರಾಮ ಕಾರಂತ ನಗರದ 2ನೇ ಹಂತದಲ್ಲಿ ಶಾಖಾ ಗ್ರಂಥಾಲಯಕ್ಕೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಅವರು, ತಾವು ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಇಂದಿನ ಅವಶ್ಯಕತೆಗಳಿಗನುಗುಣವಾಗಿ ಡಿಜಿಟಲ್ ಗ್ರಂಥಾಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸಲು ಕ್ರಮ ವಹಿಸಲಾಗಿದೆ ಎಂದರು.

ಕಳೆದ ಆರು ತಿಂಗಳ ಅವಧಿಯಲ್ಲಿ ರಾಜ್ಯದೆಲ್ಲೆಡೆ 272 ಡಿಜಿಟಲ್ ಗ್ರಂಥಾಲಯಗಳು ಕಾರ್ಯಾರಂಭ ಮಾಡಿದ್ದು, ಇಡೀ ದೇಶದಲ್ಲಿ ಇದು ಅಭೂತ ಪ್ರಯತ್ನವಾಗಿದೆ. ಕೋವಿಡ್ ಸೃಷ್ಟಿಸಿದ ಸಾಮಾಜಿಕ ಪರಿಸ್ಥಿತಿಯ ಹಿನ್ನೆಲೆಯಲ್ಲಿ ರಾಷ್ಟ್ರದಲ್ಲಿಯೇ ಮೊದಲ ಉಪಕ್ರಮವಾಗಿ ಕರ್ನಾಟಕ ರಾಜ್ಯದ ಸಾರ್ವಜನಿಕ ಗ್ರಂಥಾಲಯ ಇಲಾಖೆ ಡಿಜಿಟಲ್ ಗ್ರಂಥಾಲಯ ಮೊಬೈಲ್ ಆಪ್ ನ್ನು ಲೋಕಾರ್ಪಣೆಗೊಳಿಸಿದ್ದು, ಇಂದು ನಾಲ್ಕು ಲಕ್ಷಕ್ಕೂ ಹೆಚ್ಚು ಜನ ಈ ಆಪ್ ಬಳಸುತ್ತಿದ್ದಾರೆ. ಒಂದು ಲಕ್ಷಕ್ಕೂ ಮೀರಿದ ಪುಸ್ತಕಗಳು ಈ ಆಪ್ ನಲ್ಲಿ ಲಭ್ಯವಿವೆ ಎಂದು. ಈ ತನಕ 15 ಲಕ್ಷ ಜನರು ಇದರ ಉಪಯೋಗ ಪಡೆದಿದ್ದಾರೆ ಅವರು ಹೇಳಿದರು.

ಪುಸ್ತಕ ಸಂಸ್ಕೃತಿ ಬೆಳೆಸಲು ರಾಜ್ಯಾದ್ಯಂತ 6841 ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇದು ದೇಶದಲ್ಲಿಯೇ ಮಾದರಿ ಗ್ರಂಥಾಲಯ ವ್ಯವಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲ ವರ್ಗದ ಜನರ ಜ್ಞಾನಾರ್ಜನೆಗೆ ಉಪಯೋಗವಾಗುವಂತೆ ಗ್ರಂಥಾಲಯಗಳನ್ನು ಅವಶ್ಯಕ ಸೇವೆಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸುರೇಶ್ ಕುಮಾರ್ ಹೇಳಿದರು.

ಸ್ಥಳೀಯ ಕ್ಷೇಮಾಭಿವೃದ್ಧಿ ಸಂಘದವರು ನೀಡಿದ ಈ ನಿವೇಶನದಲ್ಲಿ ಒಂದು ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುವುದು. ಈ ಕಟ್ಟಡವು 3 ಅಂತಸ್ತಿನಿಂದ ಕೂಡಿದ್ದು, ಅದರಲ್ಲಿ ಮಹಿಳೆಯರಿಗೆ, ಹಿರಿಯ ನಾಗರೀಕರಿಗೆ ಅನುಕೂಲವಾಗುವಂತೆ ವಿವಿಧ ವಿಭಾಗಗಳನ್ನು ಸೃಜಿಸಲಾಗುವುದು. ಶಿವರಾಮ ಕಾರಂತರಿಗೆ ಮಕ್ಕಳೆಂದರೆ ಬಲುಮೆಚ್ಚುಗೆ ಇರುವುದರಿಂದ ಮಕ್ಕಳಿಗಾಗಿ ಈ ಗ್ರಂಥಾಲಯದಲ್ಲಿ ವಿಶೇಷ ವಿಭಾಗ ಮತ್ತು ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ಪ್ರತ್ಯೇಕ ವಿಭಾಗವಿರಲಿದೆ ಎಂದು ಸುರೇಶ್ ಕುಮಾರ್ ಹೇಳಿದರು.

ಈ ಕಟ್ಟಡವನ್ನು ಸಾಧ್ಯವಾದಷ್ಟು ತ್ವರಿತವಾಗಿ ನಿರ್ಮಾಣ ಮಾಡಿ ಸಾರ್ವಜನಿಕ ಉಪಯೋಗಕ್ಕೆ ಅರ್ಪಿಸಲಾಗುವುದು ಎಂದು ಹೇಳಿದ ಸಚಿವರು, ಈ ಕುರಿತು ಹೆಚ್ಚಿನ ಗಮನ ಹರಿಸಲು ಇಲಾಖೆಯ ನಿರ್ದೇಶಕರಿಗೆ ಸೂಚಿಸಿದರು. ಸ್ಥಳೀಯರ ಬೇಡಿಕೆಯಂತೆ ಈ ಗ್ರಂಥಾಲಯದ ಮುಂದೆ ಡಾ. ಶಿವರಾಮ ಕಾರಂತರ ಪ್ರತಿಮೆ ಸ್ಥಾಪನೆಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದರು ಸುರೇಶ್ ಕುಮಾರ್ ಹೇಳಿದರು.

ಮಹಾನಗರ ಪಾಲಿಕೆ ಆಡಳಿತ ಪಕ್ಷದ ನಾಯಕ ಕೆ. ಎ. ಮುನಿಂದ್ರ ಕುಮಾರ್, ನಾಡಿನ ಹಿರಿಯ ಹಾಗೂ ಪ್ರಸಿದ್ಧ ಕಲಾವಿದರಾದ ಬಿ.ಕೆ.ಎಸ್. ವರ್ಮಾ ಮತ್ತಿತರರು ಭಾಗವಹಿಸಿದ್ದರು. ಗ್ರಂಥಾಲಯ ಇಲಾಖೆ ನಿರ್ದೇಶಕ ಡಾ. ಸತೀಶ ಕುಮಾರ ಎಸ್. ಹೊಸಮನಿ ಸ್ವಾಗತಿಸಿದರು.